# ಬಿಎಸ್‌ವೈ ಲಿಂಗಾಯತ ಬ್ರಹ್ಮಾಸ್ತ್ರ

ಬಿ.ಟಾ. 27-11-20

## ಹಿಂದುಳಿದ ವರ್ಗಗಳ ಪಟ್ಟಿಗೆ ಲಿಂಗಾಯತ ಸಮುದಾಯ ಸೇರ್ಪಡೆ ನಿರ್ಧಾರ?

**ಬೆಂಗಳೂರು:** ರಾಜ್ಯ ಸಚಿವ ಸಂಪುಟ ವಿಸ್ತರಣೆ ಗೊಂದಲ ತಾರಕಕ್ಕೆ ಏರುತ್ತಿರುವಂತೆಯೇ, ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ತಮ್ಮ ಬತ್ತಳಿಕೆಯಿಂದ ಇನ್ನೊಂದು ಲಿಂಗಾಯತ ಬ್ರಹ್ಮಾಸ್ತ್ರವನ್ನು ಹೂಡಲು ಮುಂದಾಗಿದ್ದಾರೆ.

ಈಚೆಗಷ್ಟೇ ವೀರಶೈವ- ಲಿಂಗಾಯತ ಅಭಿವೃದ್ಧಿ ನಿಗಮವನ್ನು ಘೋಷಿಸುವ ಮೂಲಕ, ಲಿಂಗಾಯತ ಮತಬ್ಯಾಂಕನ್ನು ಸಿಎಂ ಮತ್ತಷ್ಟು ಭದ್ರಗೊಳಿಸಲು ಸನ್ನದ್ಧರಾಗಿದ್ದಾರೆ. ಹಿಂದುಳಿದ ವರ್ಗಗಳ ಪಟ್ಟಿಯಲ್ಲಿ ವೀರಶೈವ ಲಿಂಗಾಯತ ಸಮುದಾಯವನ್ನು ಸೇರಿಸಲು ಕೇಂದ್ರಕ್ಕೆ ಶಿಫಾರಸು ಮಾಡುವ ನಿರ್ಧಾರವನ್ನು ಶುಕ್ರವಾರ ನಡೆಯುವ ಸಂಪುಟ ಸಭೆಯಲ್ಲಿ ಕೈಗೊಳ್ಳುವ ಸಾಧ್ಯತೆ ಇದೆ. ಈ ಮೂಲಕ ಕೇಂದ್ರವನ್ನು ಇಕ್ಕಟ್ಟಿಗೆ ಸಿಲುಕಿಸುವುದು ಬಿಎಸ್‌ವೈ ತಂತ್ರ ಎಂದು ವ್ಯಾಖ್ಯಾನಿಸಲಾಗುತ್ತದೆ.

ಸಂಪುಟ ಕಸರತ್ತು

ಒಂದೆಡೆ, ಕೆಲ ಸಚಿವರು ದಿಲ್ಲಿ ಪ್ರವಾಸದಲ್ಲಿದ್ದು, ಪಕ್ಷದ ವರಿಷ್ಠರ ಭೇಟಿಗೆ ದುಂಬಾಲು ಬೀಳುತ್ತಿರುವ ಹಂತದಲ್ಲೇ ಇತ್ತ ಮುಖ್ಯಮಂತ್ರಿ ಸಂಪುಟ ಸಭೆ ಕರೆದಿದ್ದಾರೆ. ಇದಕ್ಕೆ ಪೂರ್ವಭಾವಿಯಾಗಿ, ಗುರುವಾರ ಲಿಂಗಾಯತ ಸಚಿವರಾದ ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ, ವಿ.ಸೋಮಣ್ಣ, ಜೆ.ಸಿ.ಮಾಧುಸ್ವಾಮಿ, ಸಿ.ಸಿ.ಪಾಟೀಲ್, ಬಿ.ಸಿ.ಪಾಟೀಲ್, ಶಶಿಕಲಾ ಜೊಲ್ಲೆ ಅವರೊಂದಿಗೆ ಸಭೆಯನ್ನು ನಡೆಸಿ. ಈ ಬಗ್ಗೆ ಚರ್ಚಿಸಿದ್ದಾರೆ ಎನ್ನಲಾಗಿದೆ. ಶುಕ್ರವಾರ ಪತ್ರಿಕಾಗೋಷ್ಠಿ ನಡೆಸಿ ಮಹತ್ವದ ನಿರ್ಧಾರವನ್ನು ಪ್ರಕಟಿಸುವುದಾಗಿ ಈ ಸಭೆಯಲ್ಲಿ ಯಡಿಯೂರಪ್ಪ ಹೇಳಿದ್ದರೆನ್ನಲಾಗಿದೆ.

ಸಂಪುಟ ವಿಸ್ತರಣೆ ಅಥವಾ ಪುನಾರಚನೆಗೆ ಪಕ್ಷದ ವರಿಷ್ಠರು ಇನ್ನೂ ಸಮ್ಮತಿ ನೀಡದೆ ಇರುವಾಗಲೇ ಇಂಥದ್ದೊಂದು ಮಹತ್ವದ ನಿರ್ಧಾರಕ್ಕೆ ಸಿಎಂ ಬರಲು ಮುಂದಾಗಿರುವುದು ಹಲವು ಜಿಜ್ಞಾಸೆಗೆ ಕಾರಣವಾಗಿದೆ. ಈಚೆಗಷ್ಟೇ ದಿಢೀರಾಗಿ ನಿಗಮ- ಮಂಡಳಿ ಅಧ್ಯಕ್ಷರನ್ನು ನೇಮಿಸುವ ಮೂಲಕ ಎಲ್ಲರಿಗೂ ಶಾಕ್ ನೀಡಿದ್ದರು. 2017ರಲ್ಲಿ ಪ್ರತ್ಯೇಕ ಲಿಂಗಾಯತ ಧರ್ಮದ ಹೋರಾಟದ ಸಂದರ್ಭದಲ್ಲಿ ಲಿಂಗಾಯತ ಸಮುದಾಯವನ್ನು ಕೇಂದ್ರದ ಒಬಿಸಿ ಪಟ್ಟಿಯಲ್ಲಿ ಸೇರಿಸುವ ಬೇಡಿಕೆಯನ್ನು ಸಮುದಾಯದ ಮುಖಂಡರು ಇಟ್ಟಿದ್ದರು.



ಕಚೇರಿ ಪೂಜೆಗೆ ರಕ್ಷಣಾ ಸಚಿವ ರಾಜನಾಥ ಸಿಂಗ್ ರನ್ನು ಆಹ್ವಾನಿಸಿದ ಸಿ.ಟಿ. ರವಿ.

### ಕಮಲದಾಳದ ಪ್ರಶ್ನೆಗಳು

1. ಮೊನ್ನೆ ಸಂಪುಟ ವಿಸ್ತರಣೆ ಬಗ್ಗೆ ಮೌನವಾಗಿದ್ದ ಸಿಎಂ ಯಡಿಯೂರಪ್ಪ ಬುಧವಾರ ದಿಢೀರ್ 2-3 ದಿನದಲ್ಲಿ ಸಂಪುಟ ವಿಸ್ತರಣೆ ಆಗುತ್ತದೆ ಎಂದು ಹೇಳಿದ್ದು ಯಾಕೆ?
2. ದಿಲ್ಲಿಯಲ್ಲಿ ಪಕ್ಷದ ನೂತನ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಕಚೇರಿ ಉದ್ಘಾಟನೆ ದಿನದಂದೇ ಇಲ್ಲಿ ಮುಖ್ಯಮಂತ್ರಿ ಸಂಸತ್ ಸದಸ್ಯರ ಸಭೆ ಕರೆದಿದ್ದು ಏಕೆ?
3. ಸಾಮಾನ್ಯವಾಗಿ ಗುರುವಾರ ನಡೆಯುತ್ತಿದ್ದ ರಾಜ್ಯ ಸಚಿವ ಸಂಪುಟ ಸಭೆಯನ್ನು ಈ ಬಾರಿ ಮುಖ್ಯಮಂತ್ರಿ ಶುಕ್ರವಾರ ಕರೆದಿದ್ದು ಏಕೆ?
4. ಒಂದೂವರೆ ವರ್ಷದಿಂದ ನಡೆಯದ ಸಂಸದರ ಸಭೆಯನ್ನು ಮುಖ್ಯಮಂತ್ರಿಗಳು ಈ ಟೈಮಲ್ಲೇ ಕರೆದಿದ್ದು ಏಕೆ?
5. ಲಿಂಗಾಯತ ಸಮುದಾಯದ ಸಚಿವರೊಂದಿಗೆ ಮುಖ್ಯಮಂತ್ರಿ ಯಡಿಯೂರಪ್ಪ ಅವರ ದಿಢೀರ್ ಸಭೆಯ ಮರ್ಮವೇನು?
6. ಸಂಪುಟ ವಿಸ್ತರಣೆಗೆ ವರಿಷ್ಠರು ಸ್ಪಂದನೆ ನೀಡದ ಸಮಯದಲ್ಲೇ ನಿಗಮ ಮಂಡಳಿ ಅಧ್ಯಕ್ಷರ ನೇಮಕದ ಹಿಂದಿನ ಒಳಗುಟ್ಟೇನು?

### ಸಭೆಗೆ ಇದೇ ಟೈಮ್ ಯಾಕೆ?

ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ ಅವರ ದೆಹಲಿ ಕಚೇರಿ ಪೂಜಾ ಕಾರ್ಯಕ್ರಮ ನಿಗದಿಯಾಗಿದ್ದ ಶುಕ್ರವಾರವೇ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಸಚಿವ ಸಂಪುಟ ಸಭೆ ಹಾಗೂ ಪಕ್ಷದ ಸಂಸದರ ಅನೌಪಚಾರಿಕ ಸಭೆ ಕರೆದಿರುವುದು ಪಕ್ಷದಲ್ಲಿ ಚರ್ಚೆಗೆ ಗ್ರಾಸವಾಗಿದೆ.

ಸಿ.ಟಿ.ರವಿ ಅವರ ಕಚೇರಿ ಪೂಜಾ ಕಾರ್ಯದಲ್ಲಿ ಪಾಲ್ಗೊಳ್ಳುವುದಾಗಿ ಕೆಲ ಸಚಿವರು ಈ ಹಿಂದೆಯೇ ಹೇಳಿದ್ದರು. ಹಾಗೆಯೇ ಹಲವು ಸಂಸದರು ಸಹ ದೆಹಲಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವ ಬಗ್ಗೆ ಆಪ್ತರ ಬಳಿ ಹೇಳಿಕೊಂಡಿದ್ದರು. ಆ ಮೂಲಕ ಶುಕ್ರವಾರ ಹಲವು ಸಚಿವರು, ಸಂಸದರು ಸೇರಿದಂತೆ ಪ್ರಮುಖ ನಾಯಕರು ದೆಹಲಿಯಲ್ಲಿ ಭೇಟಿಯಾಗುವುದು ನಿಶ್ಚಯವಾದಂತಿತ್ತು. ಸಚಿವರು ಹಾಗೂ ಸಂಸದರು ದಿಲ್ಲಿಯಲ್ಲಿ ಸಭೆ ಸೇರುವುದನ್ನು ತಪ್ಪಿಸಲು ಮುಖ್ಯಮಂತ್ರಿ ಈ ತಂತ್ರ ಹೂಡಿದರೇ ಎಂಬ ಪ್ರಶ್ನೆಯೂ ಪಕ್ಷದಲ್ಲಿ ಒಡಮೂಡಿದೆ. ಸಂಸದರ ಸಭೆಯನ್ನು ಮುಖ್ಯಮಂತ್ರಿಗಳು ತಮ್ಮ ಬಲ ಪ್ರದರ್ಶನಕ್ಕೆ ಬಳಸಿಕೊಳ್ಳುತ್ತಿದ್ದಾರೆ ಎಂಬ ಮಾತುಗಳೂ ಕೇಳಿಬರುತ್ತಿವೆ.

### ಸಂಪುಟ ಸಭೆ ಇಲ್ಲಿ; ಸಚಿವರು ಅಲ್ಲಿ

ಸಂಪುಟ ವಿಸ್ತರಣೆ ಅಥವಾ ಪುನಾರಚನೆಯ ಚರ್ಚೆ ತೀವ್ರಗೊಳ್ಳುತ್ತಿರುವಂತೆಯೇ, ಹಲವು ಸಚಿವರು ದೆಹಲಿಗೆ ದೌಡಾಯಿಸಿದ್ದಾರೆ. ಇತ್ತ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರೂ ಆಪ್ತ ಸಚಿವರ ಸಭೆ ನಡೆಸಿರುವುದು ಮತ್ತು ಶುಕ್ರವಾರ ಸಂಸದರ ಜತೆ ಸಮಾಲೋಚನೆಗೆ ಮುಂದಾಗಿರುವುದು ರಾಜಕೀಯ ವಲಯದಲ್ಲಿ ಮತ್ತಷ್ಟು ಕುತೂಹಲಕ್ಕೆ ಕಾರಣವಾಗಿದೆ.

ಸಾಮಾನ್ಯವಾಗಿ ಗುರುವಾರ ನಡೆಯುತ್ತಿದ್ದ ಸಚಿವ ಸಂಪುಟ ಸಭೆ ಈ ಬಾರಿ ಶುಕ್ರವಾರ ನಿಗದಿಯಾಗಿದೆ. ಉಪಮುಖ್ಯಮಂತ್ರಿ ಲಕ್ಷ್ಮಣ ಸವದಿ, ಸಚಿವರಾದ ಆರ್. ಅಶೋಕ್, ರಮೇಶ್ ಜಾರಕಿಹೊಳಿ, ಕೋಟ ಶ್ರೀನಿವಾಸ ಪೂಜಾರಿ ದೆಹಲಿಗೆ ತೆರಳಿರುವುದು ಮತ್ತು ಹಿರಿಯ ಸಚಿವ ಕೆ.ಎಸ್. ಈಶ್ವರಪ್ಪ ಹೈದರಾಬಾದ್‌ಗೆ ತೆರಳಿದ್ದು, ಸಂಪುಟ ಸಭೆಗೆ ಗೈರಾಗಲಿದ್ದಾರೆ.

ಇದೇ ವೇಳೆ ಮೈಸೂರು, ಚಾಮರಾಜನಗರ ಜಿಲ್ಲಾ ಪ್ರವಾಸದಿಂದ ಗುರುವಾರ ನಗರಕ್ಕೆ ವಾಪಸಾದ ಯಡಿಯೂರಪ್ಪ ಆಪ್ತ ಸಚಿವರೊಂದಿಗೆ ಸಭೆ ನಡೆಸಿದ್ದಾರೆ. ಸಚಿವರಾದ ಬಸವರಾಜ ಬೊಮ್ಮಾಯಿ, ವಿ.ಸೋಮಣ್ಣ, ಜೆ.ಸಿ. ಮಾಧುಸ್ವಾಮಿ, ಸಿ.ಸಿ.ಪಾಟೀಲ್, ಬಿ.ಸಿ. ಪಾಟೀಲ್, ಪ್ರಭು ಚೌಹಾಣ್, ಮಾಜಿ ಸಚಿವ ಉಮೇಶ್ ಕತ್ತಿ ಅವರೊಂದಿಗೆ ಸಮಾಲೋಚನೆ ನಡೆಸಿದ್ದಾರೆ.

**ಇಂದು ಸಂಜೆ ಅನೌಪಚಾರಿಕ ಸಭೆ:** ಇದರ ಬೆನ್ನಲ್ಲೇ, ಯಡಿಯೂರಪ್ಪ ಅವರು ಶುಕ್ರವಾರ ಗೃಹ ಕಚೇರಿ 'ಕೃಷ್ಣಾ'ದಲ್ಲಿ ಸಂಜೆ 4 ಗಂಟೆಗೆ ರಾಜ್ಯದ ಬಿಜೆಪಿ ಸಂಸದರ 'ಅನೌಪಚಾರಿಕ' ಸಭೆ ಕರೆದಿದ್ದಾರೆ. ಸಾರ್ವತ್ರಿಕ ಲೋಕಸಭಾ ಚುನಾವಣೆ ನಡೆದು ವರ್ಷ ಕಳೆದ ಬಳಿಕ ಯಡಿಯೂರಪ್ಪ ಅವರು ಸಂಸದರೊಂದಿಗೆ ಅನೌಪಚಾರಿಕ ಸಭೆ ನಡೆಸಲು ಮುಂದಾಗಿರುವುದು ಚರ್ಚೆಗೆ ಗ್ರಾಸವಾಗಿದೆ.



ನ.18ರಂದು ದೆಹಲಿಗೆ ತೆರಳಿ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರೊಂದಿಗೆ ಸಂಪುಟ ಸಂಬಂಧ ಚರ್ಚಿಸಿದ್ದ ಯಡಿಯೂರಪ್ಪ ಅವರು ಬಳಿಕ ಮೂರು ದಿನಗಳಲ್ಲಿ ವರಿಷ್ಠರಿಂದ ಸೂಚನೆ ಬರುವ ವಿಶ್ವಾಸ ವ್ಯಕ್ತಪಡಿಸಿದ್ದರು. ಆದರೆ ದೆಹಲಿಯಿಂದ ಯಾವುದೇ ಸಂದೇಶ ಬಾರದ ಕಾರಣ ಬಳಿಕ ಆ ವಿಚಾರವಾಗಿ ಮೌನಕ್ಕೆ ಶರಣಾಗಿದ್ದರು. ▶ 7ನೇ ಪುಟಕ್ಕೆ